**All India Radio: Bangalore**
**National Bulletin In Kannada**
**25.06.2026  07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**25.06.2026  07.35 a.m.**
**<><><><>**

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ಅರ್ಮೇನಿಯಾ ಪ್ರಧಾನಿಯೊಂದಿಗೆ ದೂರವಾಣಿ ಸಂಭಾಷಣೆ ; ಉಭಯ ದೇಶಗಳ ಸಂಬಂಧ ಬಲಪಡಿಸುವ ಬದ್ಧತೆ ಪುನರುಚ್ಚಾರ
2. ಹರಿಯಾಣದ ಗುರುಗ್ರಾಮದಲ್ಲಿ ಇಂದಿನಿಂದ ೧೧ನೇ ಬ್ರಿಕ್ಸ್ ಇಂಧನ ಸಚಿವರ ಸಭೆ
3. ಭಾರತ-ಚೀನಾ ಗಡಿ ವ್ಯಾಪಾರ ಪುನರಾರಂಭ ; ನಾಳೆ ಲಿಪುಲೇಖ್ ಕಣಿವೆ ಮೂಲಕ ಟಿಬೆಟ್‌ಗೆ ಪ್ರವೇಶಿಸಲಿರುವ ಭಾರತೀಯ ವರ್ತಕರ ಮೊದಲ ತಂಡ
4. ಕೇಂದ್ರ ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದಿನಿಂದ ಮೂರು ದಿನಗಳ ಇಂಗ್ಲೆಂಡ್ ಪ್ರವಾಸ
5. ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್ ; ಇಂದು ಭಾರತ-ಬಾಂಗ್ಲಾ ಮುಖಾಮುಖಿ

<><><><>

ಅರ್ಮೇನಿಯಾದಲ್ಲಿ ಇತ್ತೀಚೆಗೆ ನಡೆದ ಸಂಸತ್ ಚುನಾವಣೆಯಲ್ಲಿ ಜಯಗಳಿಸಿದ ಅರ್ಮೇನಿಯಾದ ಪ್ರಧಾನಿ ನಿಕೋಲ್ ಪಶಿನ್ಯಾನ್ ಮತ್ತು ಅವರ ಪಕ್ಷವನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ನಿನ್ನೆ ಅರ್ಮೇನಿಯಾ ಪ್ರಧಾನಿ, ನರೇಂದ್ರ ಮೋದಿ ಅವರಿಗೆ ದೂರವಾಣಿ ಕರೆ ಮಾಡಿದ್ದರು, ಈ ವೇಳೆ, ಪಶ್ಚಿಮ ಏಷ್ಯಾದಲ್ಲಿನ ಇತ್ತೀಚಿನ ಬೆಳವಣಿಗೆಗಳ ನಂತರ, ಇರಾನ್‌ನಲ್ಲಿ ಸಿಲುಕಿರುವ ಭಾರತೀಯ ಪ್ರಜೆಗಳನ್ನು ಸ್ಥಳಾಂತರಿಸಲು ಅನುಕೂಲ ಮಾಡಿಕೊಟ್ಟಿದ್ದಕ್ಕಾಗಿ ಅವರಿಗೆ ಪ್ರಧಾನಿ ಧನ್ಯವಾದ ಅರ್ಪಿಸಿದರು. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಭಾರತ ಮತ್ತು ಅರ್ಮೇನಿಯಾ ನಡುವಿನ ಪ್ರಮುಖ ಕ್ಷೇತ್ರಗಳಲ್ಲಿ ಆತ್ಮೀಯ ಮತ್ತು ಬಹುಮುಖಿ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಬದ್ಧತೆಯನ್ನು ಪುನರುಚ್ಚರಿಸಲಾಗಿದೆ ಎಂದು ತಿಳಿಸಿದ್ದಾರೆ. ಈ ಕ್ಷೇತ್ರಗಳಲ್ಲಿ ವ್ಯಾಪಾರ, ರಕ್ಷಣೆ, ತಂತ್ರಜ್ಞಾನ ಮತ್ತು ಜನರಿಂದ ಜನರಿಗೆ ಸಂಬಂಧಗಳು ಸೇರಿವೆ. ಭಾರತ-ಅರ್ಮೇನಿಯಾ ಸಂಬಂಧಗಳನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು, ಪಶಿನ್ಯಾನ್ ಅವರೊಂದಿಗೆ ನಿಕಟವಾಗಿ ಕೆಲಸ ಮಾಡಲು ಎದುರು ನೋಡುತ್ತಿರುವುದಾಗಿ ಪ್ರಧಾನಿ ನರೇಂದ್ರಮೋದಿ ತಿಳಿಸಿದ್ದಾರೆ.

<><><><>

ಭಾರತ ತನ್ನ ೨೦೨೬ರ ಬ್ರಿಕ್ಸ್ ಅಧ್ಯಕ್ಷತೆಯ ಅಡಿಯಲ್ಲಿ, ಇಂದು ಮತ್ತು ನಾಳೆ ಹರಿಯಾಣದ ಗುರುಗ್ರಾಮದಲ್ಲಿ ೧೧ನೇ ಬ್ರಿಕ್ಸ್ ಇಂಧನ ಸಚಿವರ ಸಭೆಯನ್ನು ಆಯೋಜಿಸಿದೆ. ಈ ಸಭೆಯು ಮುಖ್ಯವಾಗಿ ಮೂರು ಪ್ರಮುಖ ಆದ್ಯತೆಗಳ ಮೇಲೆ ಗಮನ ಹರಿಸಲಿದೆ - ಇಂಧನ ಭದ್ರತೆ ಮತ್ತು ಸುಸ್ಥಿರತೆ, ಇಂಧನ ಲಭ್ಯತೆ ಮತ್ತು ಸಮಾನತೆ, ಹಾಗೂ ತಂತ್ರಜ್ಞಾನ ಮತ್ತು ನಾವೀನ್ಯತೆ. ಇಂಧನ ಭದ್ರತೆ, ಸುಸ್ಥಿರತೆ ಮತ್ತು ನಾವೀನ್ಯತೆಗಳ ಮೇಲಿನ ಸಹಕಾರವನ್ನು ಬಲಪಡಿಸಲು ಎಲ್ಲಾ ೧೧ ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಇಂಧನ ಸಚಿವರು ಮತ್ತು ಹಿರಿಯ ಅಧಿಕಾರಿಗಳು ಈ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಈ ವರ್ಷ ಭಾರತದ ಬ್ರಿಕ್ಸ್ ಅಧ್ಯಕ್ಷತೆಯು 'ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಗಾಗಿ ನಿರ್ಮಾಣ' ಎಂಬ ವಿಷಯದ ಅಡಿಯಲ್ಲಿ ಮುನ್ನಡೆಯುತ್ತಿದೆ. ಜಾಗತಿಕ ದಕ್ಷಿಣದ ರಾಷ್ಟ್ರಗಳ ಆದ್ಯತೆಗಳನ್ನು ಮುನ್ನಡೆಸಲು ಮತ್ತು ಜಾಗತಿಕ ಇಂಧನ ಭವಿಷ್ಯವನ್ನು ರೂಪಿಸಲು ಭಾರತಕ್ಕೆ ಈ ಸಭೆ ಒಂದು ಪ್ರಮುಖ ವೇದಿಕೆಯನ್ನು ಒದಗಿಸಲಿದೆ.

<><><><>

ಉತ್ತರಾಖಂಡದ ಪಿಥೋರಗಢ್ ಜಿಲ್ಲೆಯ ಲಿಪುಲೇಖ್ ಕಣಿವೆಯ ಮೂಲಕ ೨೬ ಭಾರತೀಯ ವರ್ತಕರ ಮೊದಲ ತಂಡ ನಾಳೆ ಚೀನಾದ ಆಧಿಪತ್ಯದಲ್ಲಿರುವ ಟಿಬೆಟ್ ಪ್ರದೇಶವನ್ನು ಪ್ರವೇಶಿಸುವ ನಿರೀಕ್ಷೆಯಿದೆ. ಇದು ಆರು ವರ್ಷಗಳ ಸುದೀರ್ಘ ಬಿಡುವಿನ ನಂತರ ಗಡಿ ವ್ಯಾಪಾರ ಪುನರಾರಂಭಗೊಳ್ಳುತ್ತಿರುವುದರ ಸಂಕೇತವಾಗಿದೆ. ಈ ಕುರಿತು ಮಾಹಿತಿ ನೀಡಿರುವ ವಾಣಿಜ್ಯ ಅಧಿಕಾರಿ ಹಾಗೂ ಧಾರ್ಚುಲಾ ಉಪ-ವಿಭಾಗಾಧಿಕಾರಿ ಆಶಿಶ್ ಜೋಶಿ ಅವರು, ಒಟ್ಟು ೨೬ ಪಾಸುಗಳನ್ನು ನೀಡಲಾಗಿದ್ದು, ಇದರಲ್ಲಿ ೧೭ ವರ್ತಕರು ಮತ್ತು ಒಂಬತ್ತು ಸಹಾಯಕರು ಸೇರಿದ್ದಾರೆ ಎಂದು ತಿಳಿಸಿದ್ದಾರೆ. ಈ ವ್ಯಾಪಾರ ಪ್ರಕ್ರಿಯೆಯನ್ನು ಸುಲಭಗೊಳಿಸಲು ಗುಂಜಿಯಲ್ಲಿ ಕಸ್ಟಮ್ಸ್ (ಸುಂಕ) ಕಚೇರಿಯನ್ನು ಸಹ ತೆರೆಯಲಾಗಿದೆ. ವರ್ತಕರು ಈಗಾಗಲೇ ತಮ್ಮ ಸರಕುಗಳನ್ನು ಲಿಪುಲೇಖ್ ಪಾಸ್ ಬಳಿಯ ಹಳ್ಳಿಗಳ ಗೋದಾಮುಗಳಲ್ಲಿ ಸಂಗ್ರಹಿಸಿಟ್ಟಿದ್ದಾರೆ ಎಂದು ಜೋಶಿ ಮಾಹಿತಿ ನೀಡಿದ್ದಾರೆ. ಆಡಳಿತ ಮಂಡಳಿ ಇದುವರೆಗೆ ೧೦೩ ಕ್ಕೂ ಹೆಚ್ಚು ವರ್ತಕರಿಂದ ಅರ್ಜಿಗಳನ್ನು ಸ್ವೀಕರಿಸಿದ್ದು, ಸದ್ಯದಲ್ಲೇ ೨೫ ವರ್ತಕರ ಎರಡನೇ ತಂಡಕ್ಕೆ ವ್ಯಾಪಾರ ಪಾಸುಗಳನ್ನು ನೀಡಲು ಯೋಜಿಸುತ್ತಿದೆ. ವರ್ತಕರಿಗೆ ಸಹಾಯ ಮಾಡಲು, ಆಡಳಿತ ಮಂಡಳಿಯು ನಭಿಧಾಂಗ್ ಬಳಿ ಒಂದು ಸ್ಥಳವನ್ನು ನಿಗದಿಪಡಿಸಿದೆ.

<><><><>

ಮಾದಕ ದ್ರವ್ಯ ಮಾರಾಟ ಹಾಗೂ ಬಳಕೆ ತಡೆಗಟ್ಟುವ ಪ್ರಯತ್ನಗಳನ್ನು ಬಲಪಡಿಸುವ ಉದ್ದೇಶದಿಂದ  ಕೇಂದ್ರ ಗೃಹ ಸಚಿವ ಅಮಿತ್ ಶಾ ನೇತೃತ್ವದಲ್ಲಿ ನಾಳೆ ನವದೆಹಲಿಯಲ್ಲಿ ಉನ್ನತ ಮಟ್ಟದ ಸಭೆ ನಡೆಯಲಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರ ಮತ್ತು ಮಾದಕ ವಸ್ತು ಮಾರಾಟ ತಡೆಗಟ್ಟುವಲ್ಲಿ ಕಾರ್ಯನಿರ್ವಹಿಸುತ್ತಿರುವ ಏಜೆನ್ಸಿಗಳ ಪ್ರತಿನಿಧಿಗಳು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಗೃಹ ಸಚಿವಾಲಯ ತಿಳಿಸಿದೆ. ಈ ಸಂದರ್ಭದಲ್ಲಿ ಅಮಿತ್ ಶಾ ಅವರು ಮಾದಕ ದ್ರವ್ಯ ನಿಯಂತ್ರಣ  ಉಪಕ್ರಮ ಪತ್ರ ೨೦೨೬-೨೦೨೯'ನ್ನು ಬಿಡುಗಡೆ ಮಾಡಲಿದ್ದಾರೆ.

<><><><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದು ಇಂಗ್ಲೆಂಡ್‌ಗೆ ಮೂರು ದಿನಗಳ ಅಧಿಕೃತ ಪ್ರವಾಸ ಕೈಗೊಳ್ಳಲಿದ್ದಾರೆ. ಮುಂದಿನ ತಿಂಗಳ ೧೫ ರಂದು ಭಾರತ-ಯುಕೆ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ ಮತ್ತು ಸಹವರ್ತಿ ಡಬಲ್ ಕಾಂಟ್ರಿಬ್ಯೂಷನ್ ಕನ್ವೆನ್ಷನ್ ಜಾರಿಗೆ ಬರುವ ಮುನ್ನ ಈ ಭೇಟಿ ನಡೆಯಲಿದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ. ಭೇಟಿಯ ಸಮಯದಲ್ಲಿ, ಗೋಯಲ್, ಯುನೈಟೆಡ್ ಕಿಂಗ್‌ಡಮ್‌ನ ವ್ಯವಹಾರ ಮತ್ತು ವ್ಯಾಪಾರದ ರಾಜ್ಯ ಕಾರ್ಯದರ್ಶಿ ಪೀಟರ್ ಕೈಲ್ ಅವರೊಂದಿಗೆ ಉನ್ನತ ಮಟ್ಟದ ದ್ವಿಪಕ್ಷೀಯ ಸಭೆಯನ್ನು ನಡೆಸಲಿದ್ದಾರೆ. ಭಾರತೀಯ ರಫ್ತಿಗೆ ಮಾರುಕಟ್ಟೆ ಪ್ರವೇಶ ಹೆಚ್ಚಿಸುವ ಗುರಿಯನ್ನು ಹೊಂದಿರುವ, ನಿಯಂತ್ರಕ ಸಮನ್ವಯ, ಕಸ್ಟಮ್ಸ್ ಸೌಲಭ್ಯ ಮತ್ತು ಸುಂಕದ ಉದಾರೀಕರಣ ಸೇರಿದಂತೆ, ವ್ಯಾಪಾರ ಒಪ್ಪಂದದ  ಮೇಲೆ ಚರ್ಚೆಗಳು ನಡೆಯಲಿವೆ. ಎರಡೂ ದೇಶಗಳ ನಡುವೆ, ವೃತ್ತಿಪರರು ಮತ್ತು ವ್ಯವಹಾರಗಳನ್ನು ಬೆಂಬಲಿಸುವ ಡಿಸಿಸಿಯ ಕಾರ್ಯಾಚರಣೆಯ ಮಾರ್ಗಸೂಚಿಯನ್ನು ಸಹ ಪರಿಶೀಲಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ. ಸೇವಾ ವಲಯಗಳಲ್ಲಿ ಮಾರುಕಟ್ಟೆ ಪ್ರವೇಶ ಮತ್ತು ದ್ವಿಪಕ್ಷೀಯ ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳನ್ನು ಬಲಪಡಿಸುವ ಕ್ರಮಗಳ ಕುರಿತು ಚರ್ಚೆಗಳು ನಡೆಯಲಿವೆ. ಈ ಭೇಟಿಯ ಸಮಯದಲ್ಲಿ, ಗೋಯಲ್ ಅವರು ಲಂಡನ್‌ನಲ್ಲಿ ನಡೆಯಲಿರುವ ಇಂಡಿಯಾ ಗ್ಲೋಬಲ್ ಫೋರಂನ ಉದ್ಘಾಟನಾ ಅಧಿವೇಶನದಲ್ಲಿ, ಬಂಡವಾಳ, ನಾವೀನ್ಯತೆ ಮತ್ತು ಯುಕೆ-ಇಂಡಿಯಾ ಕ್ಷಣ ಎಂಬ ವಿಷಯದ ಕುರಿತು ಮಾತನಾಡಲಿದ್ದಾರೆ. ಉದ್ಯಮ ಮುಖಂಡರು ಮತ್ತು ಹೂಡಿಕೆದಾರರೊಂದಿಗೆ ಸರಣಿ ಮಾತುಕತೆಗಳಲ್ಲಿ  ಸಚಿವರು ಭಾಗವಹಿಸಲಿದ್ದಾರೆ. ಅಲ್ಲದೇ, ಎಚ್‌ಎಸ್‌ಬಿಸಿ ಮತ್ತು ರೋಲ್ಸ್ ರಾಯ್ಸ್ ಸೇರಿದಂತೆ ಪ್ರಮುಖ ಜಾಗತಿಕ ಕಂಪನಿಗಳ ಹಿರಿಯ ಕಾರ್ಯನಿರ್ವಾಹಕರೊಂದಿಗೆ ಸಂವಾದ ನಡೆಸಲಿದ್ದಾರೆ ಹಾಗೂ ಯುಕೆ-ಇಂಡಿಯಾ ವ್ಯಾಪಾರ ಮಂಡಳಿ ಆಯೋಜಿಸಿರುವ ವ್ಯವಹಾರ ಅಧಿವೇಶನದಲ್ಲಿ ಭಾಗವಹಿಸಲಿದ್ದಾರೆ. ಪ್ರಮುಖ ಜಾಗತಿಕ ಹಣಕಾಸು

ಮತ್ತು ಕೈಗಾರಿಕಾ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಏಷ್ಯಾ ಹೌಸ್ ಆಯೋಜಿಸಿರುವ ದುಂಡುಮೇಜಿನ ಚರ್ಚೆಯ ನೇತೃತ್ವವನ್ನೂ ಅವರು ವಹಿಸಲಿದ್ದಾರೆ. ಸಚಿವರ ಈ ಭೇಟಿಯು, ಜಾಗತಿಕ ವ್ಯವಹಾರಗಳು ಮತ್ತು ಹೂಡಿಕೆದಾರರೊಂದಿಗೆ ಆರ್ಥಿಕ ಒಡಂಬಡಿಕೆಯನ್ನು ಬಲಪಡಿಸುವ ಮತ್ತು ೨೦೩೦ ರ ವೇಳೆಗೆ ಭಾರತ ಮತ್ತು ಯುನೈಟೆಡ್ ಕಿಂಗ್‌ಡಮ್ ನಡುವೆ ದ್ವಿಪಕ್ಷೀಯ ವ್ಯಾಪಾರದಲ್ಲಿ ೧೨೦ ಶತಕೋಟಿ ಯುಎಸ್ ಡಾಲರ್‌ಗಳನ್ನು ಸಾಧಿಸುವ ಗುರಿಯನ್ನು ಮುನ್ನಡೆಸುವ ಭಾರತದ ಬದ್ಧತೆಯನ್ನು ಒತ್ತಿಹೇಳುತ್ತದೆ ಎಂದು ವಾಣಿಜ್ಯ ಸಚಿವಾಲಯ ತಿಳಿಸಿದೆ.

<><><><>

ಕರ್ನಾಟಕದ ಕೊಪ್ಪಳ ಜಿಲ್ಲೆ ಇಂದು ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗುತ್ತಿದ್ದು, ೫೧ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಿರುವ ತುಂಗಭದ್ರಾ ಅಣೆಕಟ್ಟೆಯ ನೂತನ ಕ್ರಸ್ಟ್ ಗೇಟ್‌ಗಳ ಉದ್ಘಾಟನಾ ಸಮಾರಂಭ ನಡೆಯಲಿದೆ. ಕೇಂದ್ರ ಜಲಸಂಪನ್ಮೂಲ ಸಚಿವ ಸಿ.ಆರ್.ಪಾಟೀಲ್, ಕ್ರಸ್ಟ್ ಗೇಟ್‌ಗಳನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಆಂಧ್ರಪ್ರದೇಶ ಹಾಗೂ ತೆಲಂಗಾಣ ಮುಖ್ಯಮಂತ್ರಿಗಳು ಈ ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದ್ದಾರೆ. ೨೦೨೪ರ ಡಿಸೆಂಬರ್‌ನಲ್ಲಿ ಜಲಾಶಯದ ೧೯ನೇ ಕ್ರಸ್ಟ್‌ಗೇಟ್ ಕೊಚ್ಚಿ ಹೋಗುವ ಮೂಲಕ ಲಕ್ಷಾಂತರ ಕ್ಯೂಸೆಕ್ ನೀರು ನದಿಗೆ ಹರಿದು ಹೋಗಿತ್ತು. ಈ ಹಿನ್ನೆಲೆಯಲ್ಲಿ ಭವಿಷ್ಯದ ದೃಷ್ಟಿಯಿಂದ ರಾಜ್ಯ ಸರ್ಕಾರ ೫೧ ಕೋಟಿ ರೂಪಾಯಿ ವೆಚ್ಚದಲ್ಲಿ ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ನೂತನ ೩೩ ಕ್ರಸ್ಟ್‌ಗೇಟ್‌ಗಳನ್ನು ಅಳವಡಿಸಿದೆ.

<><><><>

ಸಂವಿಧಾನ ಹತ್ಯಾ ದಿವಸ್ ಅನ್ನು ಇಂದು ಆಚರಿಸಲಾಗುತ್ತಿದೆ. ೧೯೭೫ ರ ಜೂನ್ ೨೫ ರಂದು ಭಾರತದ ಸಂವಿಧಾನವನ್ನು ಹೇಗೆ ದಮನಗೊಳಿಸಲಾಯಿತು ಎಂಬುದನ್ನು ನೆನಪಿಸುವ ದಿನವಾಗಿ ಆಚರಣೆ ಮಾಡಲಾಗುತ್ತದೆ. ತುರ್ತು ಪರಿಸ್ಥಿತಿಯ ಅತಿರೇಕಗಳಿಂದಾಗಿ ಸಂಕಷ್ಟಕ್ಕೊಳಗಾದ ಪ್ರತಿಯೊಬ್ಬ ವ್ಯಕ್ತಿಗೆ ಗೌರವ ನಮನ ಸಲ್ಲಿಸುವ ದಿನವೂ ಇದಾಗಿದೆ. ೧೯೭೫ರ ಇದೇ ದಿನದಂದು, ಹೆಚ್ಚುತ್ತಿದ್ದ ರಾಜಕೀಯ ಅಶಾಂತಿ ಮತ್ತು ಅಂದಿನ ಪ್ರಧಾನಿ ಇಂದಿರಾ ಗಾಂಧಿ ನೇತೃತ್ವದ ಸರ್ಕಾರದ ಕಾನೂನುಬದ್ಧತೆಯನ್ನು ಪ್ರಶ್ನಿಸುವಂತಿದ್ದ ನ್ಯಾಯಾಂಗದ ಬೆಳವಣಿಗೆಗಳ ನಡುವೆ ತುರ್ತು ಪರಿಸ್ಥಿತಿಯನ್ನು ಘೋಷಿಸಲಾಯಿತು.

<><><><>

ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್‌ನಲ್ಲಿ, ಭಾರತ ತಂಡ, ಇಂದು ಮ್ಯಾಂಚೆಸ್ಟರ್‌ನ ಎಮಿರೇಟ್ಸ್ ಓಲ್ಡ್ ಟ್ರಾಫರ್ಡ್‌ನಲ್ಲಿ ನಡೆಯಲಿರುವ ಗ್ರೂಪ್ ಎ ಪಂದ್ಯದಲ್ಲಿ ಬಾಂಗ್ಲಾದೇಶವನ್ನು ಎದುರಿಸಲಿದೆ. ಈ ಪಂದ್ಯ, ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಹರ್ಮನ್‌ಪ್ರೀತ್ ಕೌರ್ ನೇತೃತ್ವದ ಭಾರತ ವನಿತೆಯರ ತಂಡ ಪ್ರಸ್ತುತ, ಗ್ರೂಪ್ ಎ ನಲ್ಲಿ ಎರಡನೇ ಸ್ಥಾನದಲ್ಲಿದೆ, ೩ ಪಂದ್ಯಗಳ ಪೈಕಿ ೨ ಪಂದ್ಯಗಳನ್ನು ಗೆದ್ದಿದೆ. ಬಾಂಗ್ಲಾದೇಶ ಕೂಡ ೨ ಪಂದ್ಯಗಳನ್ನು ಗೆದ್ದಿದೆ, ಆದರೆ ಕಡಿಮೆ ನಿವ್ವಳ ರನ್ ರೇಟ್ ಕಾರಣ ಅವರು ನಾಲ್ಕನೇ ಸ್ಥಾನದಲ್ಲಿದ್ದಾರೆ.

<><><><>

ಪುರುಷರ ಟೆಸ್ಟ್ ಕ್ರಿಕೆಟ್‌ನಲ್ಲಿ, ಭಾರತ ಎ ಮತ್ತು ಶ್ರೀಲಂಕಾ ಎ ತಂಡಗಳ ನಡುವಿನ ಎರಡು ಪಂದ್ಯಗಳ ಸರಣಿ ಇಂದು ಬೆಳಿಗ್ಗೆ ಶ್ರೀಲಂಕಾದ ಗಾಲೆ ಅಂತರರಾಷ್ಟ್ರೀಯ ಕ್ರೀಡಾಂಗಣದಲ್ಲಿ ಪ್ರಾರಂಭವಾಗಲಿದೆ. ಈ ಪಂದ್ಯ ಭಾರತೀಯ ಕಾಲಮಾನ ಬೆಳಿಗ್ಗೆ ೧೦ ಗಂಟೆಗೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>